**ಕರ್ನಾಟಕ ಸರಕಾರದ ನಡುವಳಿಕೆಗಳು**

ವಿಷಯ:- ಜಮಖಂಡಿ ತಾಲೂಕಿನ ನಾಗನೂರ ಗ್ರಾಮದ ಎಫ್‌ಆರ್‌ಎಲ್ 524.256 ಮೀ.ರಡಿಯಲ್ಲಿ ಮುಳುಗಡೆಯಾಗುವ ಜಮೀನುಗಳ ಭೂಸ್ವಾಧೀನ ಪಡಿಸಿಕೊಳ್ಳುವ ಭೂಮಾಲೀಕರಿಗೆ ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಓದಲಾಗಿದೆ:1) ಭೂಸ್ವಾಧೀನ ಕಾಯ್ದೆ 2013ರ ಕಲಂ 11(1) ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ದಿ:20-04-2018.

2) ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3) ಈ ಕಾರ್ಯಾಲಯದ ಅವಧಿ ವಿಸ್ತರಣೆ ಪತ್ರ ಸಂ. ಕಂಇ/ಭೂಸ್ವಾ-9ಎ/ಸಿಆರ್-05/18-19/969, ದಿನಾಂಕ:18-10-2019.

4) ಪುನರ್‌ವಸತಿ ಅಧಿಕಾರಿಗಳು, ಕೃ.ಮೇ.ಯೋ. ಜಮಖಂಡಿ ಇವರ ಪತ್ರ ಸಂ:ಪುಅಜ /ನಾಗನೂರ/ಎಫ್‌ಆರ್‌ಎಲ್/19-20, ದಿನಾಂಕ: -12-2019.

5) ಮಹಾ ವ್ಯವಸ್ಥಾಪಕರು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಕೃ.ಮೇ.ಯೋ. ನವನಗರ, ಬಾಗಲಕೋಟ ಇವರ ಕಲಂ 17(2)ರಡಿ ಶಿಫಾರಸ್ಸು ದಿ:27-12-2019.

******

ಸಂ:ಕಂಇ/ಭೂಸ್ವಾ-9ಎ/ಸಿಆರ್-05/2018-19/1864 ದಿನಾಂಕ:30-12-2019.

ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಜಮಖಂಡಿ ಇವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಅಂದರೆ ಜಮಖಂಡಿ ತಾಲೂಕಿನ ನಾಗನೂರ ಗ್ರಾಮದ ಎಫ್‌ಆರ್‌ಎಲ್ 524.256 ಮೀ.ರಡಿಯಲ್ಲಿ ಮುಳುಗಡೆಯಾಗುವ ಜಮೀನನ್ನು ಸ್ವಾಧೀನ ಪಡಿಸುತ್ತಿದ್ದು ಜಮೀನು ಕಳೆದುಕೊಳ್ಳುವ ಮಾಲೀಕರಿಗೆ ಜೆಎಂಸಿ ಪ್ರಕಾರ 327 ಎ – 30 ಗುಂ.– 08 ಅನೆ ಕ್ಷೇತ್ರಕ್ಕೆ ನೂತನ ಕಾಯ್ದೆ 2013 ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿ, ಕೃ.ಮೇ.ಯೋ. ಜಮಖಂಡಿ ಇವರನ್ನು ಈ ಯೋಜನೆಗೆ ಕಾರ್ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಪ್ರಕರಣ ಅಸ್ತಿತ್ವದಲ್ಲಿರುವ ಸಂದರ್ಭಗಳು ನ್ಯಾಯಯುತ ಅಭಿಪ್ರಾಯ ಹೊಂದಿರುವುದರಿಂದ ಉಲ್ಲೇಖ (3)ರಡಿ ಕಾಯ್ದೆ ಕಲಂ 19(7)ರಡಿ ದಿನಾಂಕ:31-12-2019ರವರೆಗೆ ಅವಧಿ ವಿಸ್ತರಿಸಿ ಅನುಮತಿ ನೀಡಲಾಗಿದೆ. ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಹೆಚ್ಚು ಇರುವುದರಿಂದ ಯೋಜನಾ ವ್ಯಾಪ್ತಿಯ ಸಮಿತಿಯನ್ನು ಅಸ್ತಿತ್ವಕ್ಕೆ ತಂದು, ತಯಾರಿಸಲಾದ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಕ್ರಿಯಾ ಯೋಜನೆಯನ್ನು ದಿನಾಂಕ:04-02-2019ರಂದು ಪುನರಾವಲೋಕನ ಮಾಡಿ ಅನುಮೋದನೆಗೆ ಅಂಗೀಕರಿಸಿರುವುದು. ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಲ್ಪಿಸುವ ಕರಡು ಯಾದಿಗೆ ಸಂಬಂಧಿಸಿದಂತೆ ಯಾವುದೇ ಲಿಖಿತ ಆಕ್ಷೇಪಣೆಗಳು ಸ್ವೀಕೃತವಾಗಿರುವುದಿಲ್ಲ.

ನೂತನ ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಒಟ್ಟು ಕ್ಷೇತ್ರ 327 ಎ – 30 ಗುಂ.– 08 ಅನೆ ಕ್ಷೇತ್ರದಲ್ಲಿ ನಾಗನೂರ ಗ್ರಾಮಕ್ಕೆ ಸಂಬಂಧಿಸಿದಂತೆ ಒಟ್ಟು 175 ಕುಟುಂಬಗಳು ಭೂಮಿಯನ್ನು ಕಳೆದುಕೊಳ್ಳುತ್ತಿದ್ದು, ಅದರಲ್ಲಿ 22 ಕುಟುಂಬಗಳು ಅವರು ಹೊಂದಿದ ಕ್ಷೇತ್ರಕ್ಕಿಂತ ಬಹುಪಾಲು ಭೂಮಿಯನ್ನು ಕಳೆದುಕೊಳ್ಳುತ್ತಿದ್ದು, ಅವರ ಜೀವನಾಧಾರ ನಷ್ಟತೆಯನ್ನು ಕಳೆದುಕೊಳ್ಳುವುದರಿಂದ ಅನುಸೂಚಿ-31 2ನೇ ವಿವರ ಪಟ್ಟಿ ಅನುಸಾರ ಜೀವನಾಧಾರ ಸೌಲಭ್ಯವನ್ನು ನೀಡಲು ಪುನರ್ವಸತಿ ಪುನರ್‌ನಿರ್ಮಾಣದ ಕ್ರಿಯಾ ಯೋಜನೆಯನ್ನು ತಯಾರಿಸಿರುತ್ತಾರೆ.

. . . 2.

02-03-2020

ಇನ್ನುಳಿದ ಯಾವುದೇ ಕುಟುಂಬವು ಜೀವನೋಪಾಯಕ್ಕೆ ನಷ್ಟ ಹೊಂದುವುದಿಲ್ಲ ಎಂಬುವುದನ್ನು ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಜಮಖಂಡಿರವರು ಕೂಲಂಕುಷವಾಗಿ ಪರಿಶೀಲಿಸಿ ನೂತನ ಕಾಯ್ದೆರಡಿ ಕಲಂ 16(6)ರಡಿ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಕರಡು ಯಾದಿಯನ್ನು ತಯಾರಿಸಿ ದೃಢಪಡಿಸಿಕೊಂಡಿದ್ದಾರೆ.

ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಜಮಖಂಡಿ ಇವರು ತಯಾರಿಸಿರುವ ಯಾದಿಯನ್ನು ಶಿಫಾರಸ್ಸುಗಳನ್ನು ಆಧರಿಸಿ, ಐತೀರ್ಪು ಸಂದರ್ಭದಲ್ಲಿ ಜೀವನಾಧಾರ ಸೌಲಭ್ಯ ಪಡೆಯುವ ಕುಟುಂಬವು ಕಳೆದುಕೊಳ್ಳುತ್ತಿರುವ ಜಮೀನು ಹೊರತು ಪಡಿಸಿ, ಇತರೆ ಪ್ರದೇಶದಲ್ಲಿ ಜಮೀನು ಅಥವಾ ಇತರೆ ಯಾವುದೇ ಆಧಾಯ ಹೊಂದಿಲ್ಲವೆಂಬುದರ ಬಗ್ಗೆ ಶಪಥ ಪತ್ರ ಹಾಗೂ ಕಂದಾಯ ದಾಖಲೆ (ಕುಟುಂಬ ಭೂ ಹಿಡುವಳಿ ಪ್ರಮಾಣ ಪತ್ರ) ಪಡೆಯುವುದು. ಹಾಗೂ ಈ ಕುರಿತು ಆಡಳಿತಾಧಿಕಾರಿಗಳು ಮತ್ತೊಮ್ಮೆ ಪರಿಶೀಲಿಸುವುದು. ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಭೂಸ್ವಾಧೀನ ಕಾಯ್ದೆ ಕಲಂ 18ರಡಿ ಈ ಕೆಳಗಿನ ಷರತ್ತುಗಳನ್ನು ಕಟ್ಟು ನಿಟ್ಟಾಗಿ ಅನುಸರಿಸುವ ಮಾರ್ಗಸೂಚಿ ವಿಧಿಸುವ ಮೂಲಕ ಅನುಮೋದಿಸಲಾಗಿದೆ.

1. ಐತೀರ್ಪು ರಚಿಸುವ ಸಂದರ್ಭದಲ್ಲಿ ಜೀವನಾಧಾರ ಸೌಲಭ್ಯ ಪಡೆಯುವ ಕುಟುಂಬವು ಕಳೆದುಕೊಳ್ಳುತ್ತಿರುವ ಜಮೀನು ಹೊರತುಪಡಿಸಿ, ಇತರೆ ಪ್ರದೇಶದಲ್ಲಿ ಜಮೀನು ಅಥವಾ ಇತರೇ ಯಾವುದೇ ರೀತಿಯ ಆದಾಯ ಹೊಂದಿರುವುದಿಲ್ಲವೆಂಬುದರ ಬಗ್ಗೆ ಶಪಥ ಪತ್ರ ಹಾಗೂ ಕಂದಾಯ ದಾಖಲೆ (ಕುಟುಂಬ ಭೂಹಿಡುವಳಿ ಪ್ರಮಾಣ ಪತ್ರ) ಪಡೆಯುವುದು. ಹಾಗೂ ಈ ಕುರಿತು ಆಡಳಿತಾಧಿಕಾರಿಗಳು/ವಿಶೇಷ ಭೂಸ್ವಾಧೀನಾಧಿಕಾರಿಗಳು ಪರಿಶೀಲಿಸುವುದು.
2. ಕಾಯ್ದೆಯ ಕಲಂ 41(6)ರಡಿ ಅನುಸೂಚಿತ ಪಂಗಡ ಹಾಗೂ ಬುಡಕಟ್ಟು ಜನಾಂಗಗಳಿಗೆ ಭೂಸ್ವಾಧೀನ ಪ್ರಕರಣಗಳು ಒಳಪಟ್ಟಿದ್ದಲ್ಲಿ ಸ್ವಾಧೀನದ ಸ್ವತ್ತುಗಳು ಶೇಕಡಾ 1/3 ರಷ್ಟು ಪರಿಹಾರವನ್ನು ಸ್ವಾಧೀನ ಪೂರ್ವದಲ್ಲಿ ಬಾಧಿತ ಕುಟುಂಬಗಳಿಗೆ ಪಾವತಿಸುವುದು.
3. ಬಾಧಿತ ಕುಟುಂಬಗಳ ಸದಸ್ಯರು ಇಚ್ಛಿಸಿದಲ್ಲಿ ಅವರಿಗೆ ಉದ್ಯೋಗ ಅವಕಾಶಗಳನ್ನು ಕಲ್ಪಿಸಲು ಸ್ಥಳೀಯ ಸರ್ಕಾರ ಸಂಸ್ಥೆಗಳ ಸಹ-ಭಾಗಿತ್ವದಲ್ಲಿ, ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಪ್ರತಿ ಕುಟುಂಬಕ್ಕೆ ಉದ್ಯೋಗವನ್ನು ಒದಗಿಸಲು ಆಡಳಿತಾಧಿಕಾರಿಗಳು ಖಚಿತಪಡಿಸಿಕೊಳ್ಳುವುದು.
4. ಬಾಧಿತ ಕುಟುಂಬದ ನಿರುದ್ಯೋಗಿ ಯುವಕ/ಯುವತಿಯರಿಗೆ, ಕುಶಲ ಕರ್ಮಿಗಳಿಗೆ, ವ್ಯಾಪಾರಸ್ಥರಿಗೆ, ಹಾಗೂ ಕೃಷಿ ಕಾರ್ಮಿಕರಿಗೆ ಅವರ ಆದಾಯ ವೃದ್ಧಿಸುವ ಕೌಶಲ್ಯ ತರಬೇತಿಗಳನ್ನು ಸರ್ಕಾರಿ/ಸರ್ಕಾರೇತರ ಸಹ ಭಾಗಿತ್ವದಲ್ಲಿ ಅನುಷ್ಠಾನಗೊಳಿಸಲು, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರೊಂದಿಗೆ ಚರ್ಚಿಸಿ ಆಡಳಿತಾಧಿಕಾರಿಗಳು ಅಗತ್ಯ ಕ್ರಮ ವಹಿಸುವುದು.
5. ಯೋಜನಾ ಪ್ರದೇಶದಲ್ಲಿ ಅಸ್ತಿತ್ವದಲ್ಲಿರುವಂತಹ ಸ್ವ ಸಹಾಯ ಸಂಸ್ಥೆಗಳ ಸೇವೆಯನ್ನು ಬಾಧಿತ ಕುಟುಂಬಗಳ ಶ್ರೇಯೋಭಿವೃದ್ಧಿಗೆ ವಿಸ್ತರಿಸುವ ಮೂಲಕ ಸಂಬಂಧಿಸಿದ ಇಲಾಖೆಯಿಂದ ಪ್ರೋತ್ಸಾಯಿಸುವಂತಹ ಯೋಜನೆಯ ಸೌಲಭ್ಯಗಳನ್ನು ಒದಗಿಸಲು ಆಡಳಿತಾಧಿಕಾರಿಗಳು ಶ್ರಮಿಸುವದೊಂದಿಗೆ, ಮೇಲ್ವಿಚಾರಣೆ ಮಾಡುವುದು.
6. ಸರ್ಕಾರದ ಯೋಜನೆಗೆ ಸಾರ್ವಜನಿಕ ಉದ್ದೇಶಗಳಿಗೆ ಆಸ್ತಿ ಕಳೆದುಕೊಳ್ಳುವ ನಿರಾಶ್ರಿತ ಕುಟುಂಬಗಳಿಗೆ ಸರ್ಕಾರವು ವಿವಿಧ ಇಲಾಖೆಯಿಂದ ಒದಗಿಸಲಾಗುವ ಶ್ರೇಯೋಭಿವೃದ್ಧಿಗೆ ಯೋಜನೆಗಳನ್ನು ಜೀವನಾಧಾರ ಕಳೆದುಕೊಳ್ಳುವ ಕುಟುಂಬಗಳಿಗೆ ವಿಸ್ತರಿಸುವ ಮೂಲಕ ಪಂಚಾಯತರಾಜ್, ಜಿಲ್ಲಾ ಪಂಚಾಯತ್ ಇಲಾಖೆ, ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡಗಳ ಅಭಿವೃದ್ಧಿ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಸಹ ಭಾಗಿತ್ವದಲ್ಲಿ ಅನುಷ್ಠಾನಗೊಳಿಸುವುದು.
7. ಈ ರೀತಿಯ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣದ ಸೌಲಭ್ಯಗಳು ಯೋಜನಾ ಬಾಧಿತ ಕುಟುಂಬಗಳಿಗೆ ತಲುಪುವ ಬಗ್ಗೆ ಹಾಗೂ ಇನ್ನಿತರ ಕುಂದು ಕೊರತೆಗಳ ಬಗ್ಗೆ ಕ್ರಮ ಜರುಗಿಸಲು

...3